ದಿನಾಂಕಃ **16-07-2024** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**<u>ಪಾಟೀ ಸವಾಲುಃ ಪ್ರತಿವಾದಿ 5 ರವರ ಪರ ವಕೀಲರಿಂದ,</u>**

1) ರಾಮೇಗೌಡರವರಿಗೆ ಬಂದಂತಹ ಆಸ್ತಿಗಳನ್ನು ತನ್ನ ಕಿರಿಯ ಹೆಂಡತಿ ಹೆಸರಿಗೆ ಕ್ರಯ ಪತ್ರ ಮಾಡಿಕೊಟ್ಟಿರುವ ಬಗ್ಗೆ ದಾಖಲೆ ಹಾಜರುಪಡಿಸಿರುತ್ತೇನೆ. ಮೃತ 1 ನೇ ಪ್ರತಿವಾದಿ ಹೆಸರಿಗೆ ಆಗಿರುವ ಕ್ರಯ ಪತ್ರವನ್ನು ಹಾಜರುಪಡಿಸಿರುತ್ತೇನೆ. ದಾವಾ ಆಸ್ತಿಗಳು ಪಿತ್ರಾರ್ಜಿತ ಆಸ್ತಿಗಳು ಎಂದು ತೋರಿಸಲು ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ. ಮಮತ ರವರ ಮದುವೆ ಬಗ್ಗೆ ನನಗೆ ಗೊತ್ತಿರುವುದಿಲ್ಲ. 5 ನೇ ಪ್ರತಿವಾದಿಗೆ ಮೈಸೂರಿನಲ್ಲಿ ಒಂದು ಮನೆಯನ್ನು ನೀಡಿರುತ್ತಾರೆ. 5 ನೇ ಪ್ರತಿವಾದಿಯನ್ನು ಮೈಸೂರಿನ ವಾಸು ಎಂಬುವವರಿಗೆ ಕೊಟ್ಟು ಮದುವೆ ಮಾಡಿರುತ್ತಾರೆ ಎಂದರೆ ಸರಿ. ಮೈಸೂರಿನ ಮನೆಯನ್ನು 5 ನೇ ಪ್ರತಿವಾದಿಗೆ ನೀಡಿದ್ದಾರೆ ಎಂದು ತೋರಿಸಲು ದಾಖಲೆ ಹಾಜರುಪಡಿಸಿರುತ್ತೇನೆ.

2) ದಿಃ 15-11-1983 ರಂದು ದಾವಾ ಆಸ್ತಿಗಳಲ್ಲಿ ನನ್ನ ತಾಯಿ ಪುಟ್ಟಮ್ಮ ರವರು ಭಾಗ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಪ್ರತಿವಾದಿಗಳ ಮಧ್ಯೆ ಯಾವುದೇ ವಿಭಾಗ ಆಗಿರುವುದಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿ 5 ರವರು ಮೈಸೂರಿನಲ್ಲಿ ಅವರ ಗಂಡ ಮನೆಯಲ್ಲಿ ವಾಸವಾಗಿದ್ದಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿಗಳು ಮೃತ 1 ನೇ ಪ್ರತಿವಾದಿಯ ಸ್ವಯಾರ್ಜಿತ ಆಸ್ತಿ ಎಂದರೆ ಸರಿಯಲ್ಲ. ನನ್ನ ತಂದೆ ದಿಃ 06-08-1997 ರಂದು ತೀರಿಕೊಂಡಿರುತ್ತಾರೆ ಎಂದರೆ ಸರಿ. ನನ್ನ ತಂದೆ ಜೀವಂತ ಅವಧಿಯಲ್ಲಿ ತನ್ನ ತಂದೆಯ ಇಬ್ಬರು ಹೆಂಡತಿಯರಿಗೆ ವಿಭಾಗ ಮಾಡಿಕೊಟ್ಟಿದ್ದಾರೆ ಎಂದರೆ ಸರಿಯಲ್ಲ. ಪ್ರತಿವಾದಿಗಳಿಗೆ ಮೋಸ ಮಾಡುವ ಉದ್ದೇಶದಿಂದ ಸುಳ್ಳು ದಾವೆ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು</u>** ಃ ಪ್ರತಿವಾದಿ 2, 3 ಮತ್ತು 4 ಏಕಪಕ್ಷೀಯವಾಗಿರುತ್ತಾರೆ ಕಾರಣ ಪಾಟೀ ಸವಾಲು ಇಲ್ಲ ಎಂದು ಪರಿಗಣಿಸಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ.